**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 06 ರಾಕಾವ್ಯ 2012 (ಭಾಗ)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 07.02.2014

**ತಿದ್ದುಪಡಿ**

ವಿಷಯ: ಭಾರತ ಸಂವಿಧಾನದ ಅನುಚ್ಛೇದ 371(ಜೆ)(2)(ಬಿ)ರ ತಿದ್ದುಪಡಿ ಆದೇಶದಂತೆ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ಎಲ್ಲಾ ಸರ್ಕಾರಿ ಇಲಾಖೆ/ನಿಗಮ/ಮಂಡಳಿ/ವಿಶ್ವವಿದ್ಯಾನಿಲಯ ಗಳಲ್ಲಿನ ಎಲ್ಲಾ ವರ್ಗಗಳ ಹುದ್ದೆಗಳ ಭರ್ತಿ ಮಾಡುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸುವ ಬಗ್ಗೆ.

*****

ದಿನಾಂಕ 23.02.2013ರ ಆದೇಶದ ಮೊದಲನೆ ಪ್ಯಾರಾದಲ್ಲಿನ ಪರಿವಿಡಿಯನ್ನು ಮಾರ್ಪಡಿಸಿ ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು:

"ಘನತೆವೆತ್ತ ~~ರಾಷ್ಟ್ರಪತಿಗಳು~~ ಘನತೆವೆತ್ತ ರಾಜ್ಯಪಾಲರಿಗೆ ವಿಶೇಷ ಜವಾಬ್ದಾರಿಯನ್ನು ವಹಿಸಿಕೊಡುವಂತೆ ಸಂಸತ್ತಿನಲ್ಲಿ ತೀರ್ಮಾನಗೊಂಡ ನಂತರ ದಿನಾಂಕ 24.10.2013ರ ಅಧಿಸೂಚನೆಯ ಮೂಲಕ ಘನತೆವೆತ್ತ ರಾಷ್ಟ್ರಪತಿಗಳು ಭಾರತ ಸಂವಿಧಾನದ ಅನುಚ್ಛೇದ 371(ಜೆ)ಯನ್ನು ಅನುಷ್ಠಾನಗೊಳಿಸುವ ದಿಸೆಯಲ್ಲಿ ಸೂಕ್ತ ಆದೇಶಗಳನ್ನು ಹೊರಡಿಸುವ ಜವಾಬ್ದಾರಿಯನ್ನು ಘನತೆವೆತ್ತ ರಾಜ್ಯಪಾಲರಿಗೆ ವಹಿಸಿದ್ದು, ಘನತೆವೆತ್ತ ರಾಜ್ಯಪಾಲರು ಅನುಮೋದಿಸಿದ ತತ್ಸಂಬಂಧವಾದ 4 ಆದೇಶಗಳನ್ನು ದಿನಾಂಕ 06.11.2013ರ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದ್ದು, ಸದರಿ ಆದೇಶಗಳಲ್ಲಿ ಒಂದಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಉಪಬಂಧ 3ರನ್ವಯ, ಸದರಿ ಆದೇಶವು ಪ್ರಾರಂಭವಾದಾಗಿನಿಂದ 3 ತಿಂಗಳುಗಳೊಳಗೆ ರಾಜ್ಯ ಸರ್ಕಾರದ ಅಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳು ಅಥವಾ ಸಿವಿಲ್ ಹುದ್ದೆಗಳು ಅಥವಾ ರಾಜ್ಯ ಸರ್ಕಾರದ ನಿಯಂತ್ರಣದ ಅಡಿಯಲ್ಲಿ ಆ ಪ್ರದೇಶದಲ್ಲಿನ ಸ್ಥಳೀಯ ಪ್ರಾಧಿಕಾರ ಅಥವಾ ಸಂಸ್ಥೆ ಅಥವಾ ಸಂಘಟನೆಯಲ್ಲಿನ ಹುದ್ದೆಗಳನ್ನು ಹಾಗೂ ರಾಜ್ಯ ಮಟ್ಟದ ಕಛೇರಿಗಳಲ್ಲಿನ ಹುದ್ದೆಗಳನ್ನು ಗುರುತಿಸಿ ಸ್ಥಳೀಯ ವೃಂದವನ್ನು ರಚಿಸಿ ಅಧಿಸೂಚಿಸಬೇಕಾಗಿರುತ್ತದೆ. ಅಂತೆಯೇ, ಸಂಬಂಧಿಸಿದ ವೃಂದ ಮತ್ತು ನೇಮಕಾತಿ ಪ್ರಾಧಿಕಾರಗಳು ಸ್ಥಳೀಯ ವೃಂದ ರಚಿಸಿ ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ಮೀಸಲಾತಿ ಹಾಗೂ ರಾಜ್ಯ ಮಟ್ಟದಲ್ಲೂ ಸಹ (ಉಪಬಂಧ 13ರಂತೆ) ಮೀಸಲಾತಿ ನಿಗದಿಪಡಿಸಿ, ಪ್ರತ್ಯೇಕ ಸ್ಥಳೀಯ ವೃಂದ ರಚಿಸಿದ ನಂತರವೇ ನೇರ ನೇಮಕಾತಿ ಹಾಗೂ ಮುಂಬಡ್ತಿ ಪ್ರಕ್ರಿಯೆಯನ್ನು ಮುಂದುವರೆಸುವಂತೆ ಆದೇಶಿಸಲಾಗಿದೆ."

07.02.2014
**(ಕೆ.ಎಲ್. ಲೋಕನಾಥ)**
ಸರ್ಕಾರದ ಜಂಟಿ ಕಾರ್ಯದರ್ಶಿ
(ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು.
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
6. ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ/ಬೆಂಗಳೂರು/ಮೈಸೂರು/ಬೆಳಗಾಂ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಪತಿಗಳು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ.
10. ಎಲ್ಲಾ ನಿಗಮ/ಮಂಡಳಿಗಳ ಅಧ್ಯಕ್ಷರು.
11. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.